ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 283 ಎಲ್‌ಸಿ. 2005

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 01-09-2005

# ಸುತ್ತೋಲೆ

ವಿಷಯ:-ನ್ಯಾಯಾಲಯಕ್ಕೆ ಸಂಬಂಧಿಸಿದ ವಿಷಯಗಳ ಮೇಲೆ ತಕ್ಷಣ ಕ್ರಮ ಕೈಗೊಳ್ಳುವ ಬಗ್ಗೆ.

----------

ಸುತ್ತೋಲೆ ಸಂಖ್ಯೆ: 259 ಎಲ್‌ಸಿ 2005, ದಿನಾಂಕ 13.07.2005ರ ಪ್ರತಿಯನ್ನು ಇದರೊಂದಿಗೆ ಲಗತ್ತಿಸಲಾಗಿದೆ. ಈ ಸುತ್ತೋಲೆಯಲ್ಲಿರುವ ಸೂಚನೆಗಳನ್ನು ಯಾವುದೇ ವ್ಯತ್ಯಯ ಮಾಡದೆ ಮತ್ತು ಚಾಚೂ ತಪ್ಪದೆ ಪಾಲಿಸಿ ಕಾರ್ಯಗತಗೊಳಿಸುವಂತೆ ಕರ್ನಾಟಕ ಸರ್ಕಾರದ ಎಲ್ಲಾ ಅಧಿಕಾರಿಗಳಿಗೆ ಈ ಮೂಲಕ ಮತ್ತೊಮ್ಮೆ ಒತ್ತಿ ಹೇಳಲಾಗಿದೆ. ಉದ್ದೇಶಪೂರ್ವಕ ಅಥವಾ ಉದ್ದೇಶಪೂರ್ವಕವಲ್ಲದ ಯಾವುದೇ ಲೋಪಕ್ಕೆ ತ್ವರಿತ ಶಿಸ್ತಿನ ಕ್ರಮವನ್ನು ಕೈಗೊಂಡು ಗುರುತರವಾದ ದಂಡನೆಯನ್ನು ವಿಧಿಸಲಾಗುವುದು.

2. ಲಗತ್ತಿಸಿದ ಸುತ್ತೋಲೆಯಲ್ಲಿನ ಸೂಚನೆಗಳ ನಂತರವೂ ಜಿಲ್ಲಾಧಿಕಾರಿಯೊಬ್ಬರು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ವಿಚಾರಣೆಗೆ ಬಂದಿದ್ದ ಸಾರ್ವಜನಿಕ ಹಿತಾಸಕ್ತಿಯ ಮೊಕದ್ದಮೆಯೊಂದಕ್ಕೆ ಸಂಬಂಧಿಸಿದಂತೆ ಸ್ಪಂದಿಸದ ಕಾರಣ ಕರ್ನಾಟಕದ ಗೌರವಾನ್ವಿತ ಮುಖ್ಯ ನ್ಯಾಯಾಧೀಶರ ಪೀಠದ ಮುಂದೆ ಅದರ ವಿಚಾರಣೆಯು ನಡೆಯುವಂತಾಗಿದೆ. ಇದೊಂದು ಅಕ್ಷಮ್ಯ ಅಪರಾಧದ ವಿಚಾರವಾಗಿ ಉಚ್ಚ ನ್ಯಾಯಾಲಯದ ಮುಂದೆ ಮುಖ್ಯ ಕಾರ್ಯದರ್ಶಿಯವರು ಮತ್ತೊಮ್ಮೆ ಹಾಜರಾಗಿ ತ್ವರಿತವಾಗಿ ಪರಿಹಾರಕ ಕ್ರಮ ಕೈಗೊಳ್ಳುವ ಬಗ್ಗೆ ಆಶ್ವಾಸನೆ ನೀಡಬೇಕಾಯಿತು. ಆದ್ದರಿಂದ ಕರ್ನಾಟಕ ಸರ್ಕಾರದ ಪ್ರತಿಯೊಂದು ಹಂತದ ಹಾಗೂ ಪ್ರತಿಯೊಂದು ಇಲಾಖೆಯ ಎಲ್ಲಾ ಹಂತದ ಅಧಿಕಾರಿಗಳು/ಪುರಸಭೆ/ನಗರ ಸಭಾ ಪ್ರಾಧಿಕಾರಗಳ ಅಧಿಕಾರಿಗಳು/ಸಿಬ್ಬಂದಿವರ್ಗದವರೂ ಸೇರಿದಂತೆ/ಸಂಸ್ಥೆಗಳು/ನಗರ ಸಭೆಗಳು/ಪಂಚಾಯತ್ ರಾಜ್ ಸಂಸ್ಥೆಗಳೂ ಮೇಲ್ಕಾಣಿಸಿದ ದಿನಾಂಕ 13.07.2005ರ ಸುತ್ತೋಲೆ ಸಂಖ್ಯೆ: 259 ಎಲ್‌ಸಿ 2005ರಲ್ಲಿರುವ ಸೂಚನೆಗಳನ್ನು ಚಾಚೂ ತಪ್ಪದೆ ಪಾಲಿಸಿ ಅವುಗಳನ್ನು ಸಂಪೂರ್ಣವಾಗಿ ಕಾರ್ಯಗತಗೊಳಿಸುವಂತೆ ಈ ಮೂಲಕ ಸೂಚಿಸಲಾಗಿದೆ. ಸರ್ಕಾರದ ಕಾರ್ಯದರ್ಶಿಗಳು ಅವರ ಅಧೀನದಲ್ಲಿ ಬರುವ ಎಲ್ಲಾ ಅಧಿಕಾರಿಗಳು ಮತ್ತು ಎಲ್ಲಾ ಇಲಾಖೆಗಳ/ಕಛೇರಿಗಳು ಮೇಲ್ಕಾಣಿಸಿದ ಸೂಚನೆಗಳನ್ನು ಪಾಲಿಸಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.

[ಬಿ. ಕೆ. ದಾಸ್]
ಮುಖ್ಯ ಕಾರ್ಯದರ್ಶಿ

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಜಿಲ್ಲಾಧಿಕಾರಿಗಳು
4. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
5. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
6. ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
7. ಎಲ್ಲಾ ತಾಲ್ಲೂಕು ಪಂಚಾಯತ್‌ಗಳ/ಗ್ರಾಮ ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು
8. ಎಲ್ಲಾ ಮುನಿಸಿಪಲ್ ಆಯುಕ್ತರುಗಳು/ಎಲ್ಲಾ ಮುನಿಸಿಪಾಲಿಟಿಗಳ ಮುಖ್ಯಾಧಿಕಾರಿಗಳು
9. ಸಂಪಾದಕರು, ರಾಜ್ಯ ಪತ್ರ
10. ಶಾಖಾ ರಕ್ಷಾ ಕಡತ.